# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕಿ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **735** |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.12.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಬಡ ಕುಟುಂಬಗಳಿಗೆ ಬಿಪಿಎಲ್ ಕಾರ್ಡ್‌ಗಾಗಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ಮಂಜೂರು ಮಾಡಿದ ಅರ್ಜಿಗಳ ಸಂಖ್ಯೆ ಎಷ್ಟು; ತಿರಸ್ಕೃತವಾದ ಅರ್ಜಿಗಳು, ಕಾರ್ಡ್‌ಗಳು ಎಷ್ಟು; (ಮಾಹಿತಿ ಒದಗಿಸುವುದು)</td><td>ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಬಡ ಕುಟುಂಬಗಳಿಗೆ ಬಿಪಿಎಲ್ ಕಾರ್ಡ್‌ಗಾಗಿ ಬಂದ ಅರ್ಜಿಗಳ ಸಂಖ್ಯೆ, ಮಂಜೂರು ಮಾಡಿದ ಅರ್ಜಿಗಳ ಸಂಖ್ಯೆ ಹಾಗೂ ತಿರಸ್ಕೃತವಾದ ಅರ್ಜಿಗಳ ವಿವರಗಳು ಈ ಕೆಳಕಂಡಂತಿರುತ್ತವೆ.
<table>
<tr><th>ಜಿಲ್ಲೆ</th><th>ಸ್ವೀಕರಿಸಿದ ಅರ್ಜಿಗಳು</th><th>ಮಂಜೂರು ಮಾಡಿದ ಅರ್ಜಿಗಳು</th><th>ತಿರಸ್ಕೃತ ಅರ್ಜಿಗಳು</th></tr>
<tr><td>ಬಳ್ಳಾರಿ</td><td>24,894</td><td>19,020</td><td>5,446</td></tr>
<tr><td>ವಿಜಯನಗರ</td><td>7,468</td><td>4,315</td><td>937</td></tr>
</table></td></tr>
<tr><td>ಆ</td><td>ಸದರಿ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಮಂಜೂರಾದ ಕಾರ್ಡ್‌ಗಳಲ್ಲಿ ನಂತರ ರದ್ದತಿ ಅಥವಾ ಬದಲಾವಣೆ ಮಾಡಿದ ಕಾರ್ಡ್‌ಗಳೆಷ್ಟು; (ವಿವರ ನೀಡವುದು)</td><td>ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ಕಳೆದ 2 ವರ್ಷಗಳಲ್ಲಿ ಮಂಜೂರಾದ ಕಾರ್ಡುಗಳಲ್ಲಿ ನಂತರ ರದ್ದತಿ ಅಥವಾ ಬದಲಾವಣೆ ಮಾಡಿರುವುದಿಲ್ಲ.</td></tr>
<tr><td>ಇ</td><td>ಸರ್ಕಾರವು ಬಿಪಿಎಲ್ ಕಾರ್ಡ್‌ಗಳನ್ನು ರದ್ದತಿ ಅಥವಾ ಬದಲಾವಣೆ ಮಾಡಲು ಇರುವ ಮಾನದಂಡಗಳೇನು; ರದ್ದು ಮಾಡಲು ಕಾರಣಗಳೇನು;</td><td>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಸರ್ಕಾರವು 2017 ರಲ್ಲಿ ಹೊರಗಿಡುವ ಮಾನದಂಡಗಳನ್ನು ರೂಪಿಸಿದೆ.<br>• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ಜಿಎಸ್ ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.</td></tr>
</table>

| | | |
|---|---|---|
| | | • ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು. |
| ಈ | ಹೊಸದಾಗಿ ಪಡಿತರ ಚೀಟಿಗಳನ್ನು ವಿತರಿಸಲು ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡಲಾಗುವುದೇ? (ಮಾಹಿತಿ ಒದಗಿಸುವುದು) | ಪ್ರಸ್ತುತ ಆಹಾರ ಇಲಾಖೆಯಲ್ಲಿ ಬಳಸಲಾಗುತ್ತಿರುವ ಸರ್ವರ್ ಹಳೆಯದಾಗಿದ್ದು, ಈ ಕಾರಣದಿಂದಾಗಿ ಎನ್ .ಐ.ಸಿ ಯಿಂದ ಕೆ.ಎಸ್.ಡಿ.ಸಿ (Karnataka State Data Centre) ಗೆ ಆಹಾರ ತಂತ್ರಾಂಶದ Migration ಕಾರ್ಯವು ಅಂತಿಮ ಹಂತದಲ್ಲಿದ್ದು, ಎನ್.ಐ.ಸಿ ಯಿಂದ ಕೆ.ಎಸ್ .ಡಿ.ಸಿ 'ಗೆ Migration ಕಾರ್ಯ ಪೂರ್ಣಗೊಂಡ ನಂತರ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ/ ಪಡಿತರ ಚೀಟಿ ತಿದ್ದುಪಡಿ ಮಾಡುವ ಪ್ರಕ್ರಿಯೆ ನಿರಂತರವಾಗಿರುತ್ತದೆ.<br>ಆದಾಗ್ಯೂ ತುರ್ತು ವೈದ್ಯಕೀಯ ಪರಿಸ್ಥಿತಿ ಇರುವ ಅರ್ಹ ಫಲಾನುಭವಿಗಳಿಗೆ, ಇ-ಶ್ರಮ್ ನೋಂದಾಯಿತ ಕಾರ್ಮಿಕರಿಗೆ, ಬುಡಕಟ್ಟು ಜನಾಂಗದವರಿಗೆ, ಹೊಸ ಆದ್ಯತಾ ಪಡಿತರ ಚೀಟಿ ನೀಡಲಾಗುತ್ತಿದೆ. |

**ಆನಾಸ 401 ಡಿಆರ್‌ಎ 2024**

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು